Received on. 09/04/2021

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/03(A)/ವಿವೇತಂ/ಸ.ಪತ್ರ/2021-22/ವಿ.ವೇ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,

ಬೆಂಗಳೂರು, ದಿನಾಂಕ:08.04.2021.

## ಸುತ್ತೋಲೆ

ವಿಷಯ : ವಿದ್ಯಾರ್ಥಿ ವೇತನ ತಂತ್ರಾಂಶಕ್ಕೆ ವಿದ್ಯಾರ್ಥಿಗಳ ದತ್ತಾಂಶ ಒದಗಿಸುವ ಬಗ್ಗೆ

ಉಲ್ಲೇಖ :1)ಸರ್ಕಾರದ ಪತ್ರಸಂಖೆ:ಸಿಆಸುಇ 14 ಪಿಆರ್‌ಜೆ 2021, ದಿನಾಂಕ:27.01.2021

2)ದಿನಾಂಕ:10.03.2021 ರಂದು ಸ್ವೀಕರಿಸಿದ ಸರ್ಕಾರದ ಪತ್ರ ಸಂಖ್ಯೆ:ಲಾ-ಹೆಚ್‌ಆರ್‌ಎಮ್/13/2021, ದಿನಾಂಕ:05.02.2021

*********

ಸೂಚಿತ ವಿಷಯಕ್ಕೆ ಸಂಬಂದಿಸಿದಂತೆ ಉಲ್ಲೇಖ (1)ರ ಸರ್ಕಾರದ ಪತ್ರದಲ್ಲಿ ಮೆಟ್ರಿಕ್ ನಂತರದ ಪ್ರಥಮ ವರ್ಷ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದ ಮಂಜೂರಾತಿಗಾಗಿ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸುವಾಗ ವಿಶ್ವವಿದ್ಯಾಲಯವು ನೀಡುವ ನೋಂದಣಿ ಸಂಖ್ಯೆಯನ್ನು ನೀಡಿದ ನಂತರ ಆ ದತ್ತಾಂಶದ ಜೊತೆಗೆ ತಾತ್ಕಾಲಿಕ ನೋಂದಣಿ ಸಂಖ್ಯೆಯ ದತ್ತಾಂಶವನ್ನು ಮ್ಯಾಪ್ ಮಾಡಿ ಎ.ಪಿ.ಐ ಮೂಲಕ ಒದಗಿಸಲು ಸೂಚಿಸಲಾಗಿರುತ್ತದೆ.

ಅದರಂತೆ ಉಲ್ಲೇಖ(2) ರ ಸರ್ಕಾದರದ ಪತ್ರದಲ್ಲಿ ಸೂಚಿಸಿರುವಂತೆ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ಎಲ್ಲಾ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಮಂಜೂರಾತಿಗೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಲು ಸೂಕ್ತ ಮಾರ್ಗದರ್ಶನ ಮತ್ತು ನೆರವನ್ನು ವಿದ್ಯಾರ್ಥಿಗಳಿಗೆ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ..

ಕಾಲೇಜು ಶಿಕ್ಷಣ ನಿರ್ದೇಶಕರು.

ಇವರಿಗೆ,

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ.
2) ಸಂಬಂಧಪಟ್ಟ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ

<u>ಪ್ರತಿಯನ್ನು:</u>

3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ,ಬೆಂಗಳೂರು. - ಮಾಹಿತಿಗಾಗಿ.
4) ಯೋಜನಾ ನಿರ್ದೇಶಕರು (ವಿದ್ಯಾರ್ಥಿವೇತನ),ಇ-ಆಡಳಿತ ಕೇಂದ್ರ,ಬಹುಮಹಡಿಗಳ ಕಟ್ಟಡ,ಬೆಂಗಳೂರು.
5) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಕಛೇರಿ ಪ್ರತಿ.

ವಿದ್ಯಾರ್ಥಿವೇತನ

# ಕರ್ನಾಟಕ ಸರ್ಕಾರ

ಸಂಖ್ಯೆ: ಲಾ-ಹೆಚ್‌ಆರ್‌ಎಮ್/13/2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 05.02.2021

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಾನೂನು ಇಲಾಖೆ,
ವಿಧಾನಸೌಧ,
ಬೆಂಗಳೂರು-560001.

"ಅತೀಜರೂರು"

217
10/03/21

ಇವರಿಗೆ,

ಆಯುಕ್ತರು,
ಕಾಲೇಜು ಶಿಕ್ಷಣ ಇಲಾಖೆ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ,
ಬೆಂಗಳೂರು-560001.

ಮಾನ್ಯರೇ,

ವಿಷಯ : ವಿದ್ಯಾರ್ಥಿ ವೇತನದ ತಂತ್ರಾಂಶಕ್ಕೆ ವಿದ್ಯಾರ್ಥಿಗಳ ದತ್ತಾಂಶ ಒದಗಿಸುವ ಕುರಿತು.

ಉಲ್ಲೇಖ: ಸರ್ಕಾರದ ಅಪರ ಕಾರ್ಯದರ್ಶಿ, ಸಿಆಸು ಇಲಾಖೆ (ಇ-ಆಡಳಿತ) ಇವರ ದಿನಾಂಕ: 27.01.2021ರ ಪತ್ರ ಸಂಖ್ಯೆ: ಸಿಆಸುಇ 14 ಪಿಆರ್‌ಜೆ 2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸುತ್ತಾ, ಸದರಿ ಪತ್ರದಲ್ಲಿ ಕೋರಿರುವಂತೆ, ವಿದ್ಯಾರ್ಥಿ ವೇತನದ ತಂತ್ರಾಂಶಕ್ಕೆ ವಿದ್ಯಾರ್ಥಿಗಳ ದತ್ತಾಂಶವನ್ನು ಒದಗಿಸುವ ಸಂಭಂಧ ಕ್ರಮಕೈಗೊಂಡು, ಕೈಗೊಂಡ ಕ್ರಮದ ಅನುಪಾಲನಾ ವರದಿಯನ್ನು ನೇರವಾಗಿ ಯೋಜನಾ ನಿರ್ದೇಶಕರು (ವಿದ್ಯಾರ್ಥಿ ವೇತನ), ಇ-ಆಡಳಿತ ಕೇಂದ್ರ ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಕಳುಹಿಸಿ ಅದರ ಪ್ರತಿಯನ್ನು ಮಾಹಿತಿಗಾಗಿ ಕಾನೂನು ಇಲಾಖೆಯ ಮಾನವ ಹಕ್ಕುಗಳ ಶಾಖೆಗೆ ಕಳುಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

N. Radha 5/2/21
(ಎನ್. ರಾಧ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾನೂನು ಇಲಾಖೆ (ಮಾನವ ಹಕ್ಕುಗಳು)

2188998(5)/2021/DO3

File No.DPAR-PRJ/14/2021-DO3-dparegovse

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 14 ಪಿಆರ್‌ಜೆ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:27ನೇ ಜನವರಿ 2021

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಇ-ಆಡಳಿತ), ಬೆಂಗಳೂರು.

"ಅತಿ ಜರೂರು"

ಇವರಿಗೆ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ / ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ / ವೈದ್ಯಕೀಯ ಶಿಕ್ಷಣ ಇಲಾಖೆ / ಕೃಷಿ ಇಲಾಖೆ / ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ / ಕಾನೂನು ಇಲಾಖೆ / ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ / ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
2. ಉನ್ನತ ಶಿಕ್ಷಣ ಇಲಾಖೆ / ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ / ವೈದ್ಯಕೀಯ ಶಿಕ್ಷಣ ಇಲಾಖೆ / ಕೃಷಿ ಇಲಾಖೆ / ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ / ಕಾನೂನು ಇಲಾಖೆ / ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ / ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳ ವ್ಯಾಪ್ತಿಗೆ ಬರುವ ಎಲ್ಲಾ ವಿಶ್ವವಿದ್ಯಾನಿಲಯಗಳ ಉಪ ಕುಲಪತಿಗಳು / ಇಲಾಖಾ ಮುಖ್ಯಸ್ಥರುಗಳು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.

ಮಾನ್ಯರೇ,

ವಿಷಯ: ವಿದ್ಯಾರ್ಥಿ ವೇತನದ ತಂತ್ರಾಂಶಕ್ಕೆ ವಿದ್ಯಾರ್ಥಿಗಳ ದತ್ತಾಂಶ ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಎಲ್ಲಾ ವಿದ್ಯಾರ್ಥಿಗಳ ದತ್ತಾಂಶವನ್ನು ವಿಶ್ವವಿದ್ಯಾಲಯಗಳಿಂದ UniData Server ಮೂಲಕ ಪಡೆಯಲಾಗುತ್ತಿದ್ದು, ವಿಶ್ವವಿದ್ಯಾಲಯದ Registration (ನೋಂದಣಿ) ನಂಬರ್ ಮೂಲಕ ವಿದ್ಯಾರ್ಥಿಗಳನ್ನು ಗುರುತಿಸಲಾಗುತ್ತಿದೆ. ಆದರೆ ಪ್ರಥಮ ವರ್ಷದ ಕೋರ್ಸುಗಳಿಗೆ ಬರುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದಿಂದ Registration Number ನೀಡುವ ಪ್ರಕ್ರಿಯೆಯು ತಡವಾಗುವ ಕಾರಣ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ತಾತ್ಕಾಲಿಕವಾಗಿ ನೋಂದಣಿ ಸಂಖ್ಯೆಯನ್ನು (Temporary Registration Number) ನೀಡಿ ವಿದ್ಯಾರ್ಥಿಗಳ ದತ್ತಾಂಶವನ್ನು UniData server ಗೆ Push ಮಾಡುವಂತೆ ತಿಳಿಸಲಾಗಿದೆ.

-2-

ಮುಂದುವರೆದು, ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಖಾಯಂ (Permanent Registration Number) ನೋಂದಣಿ ಸಂಖ್ಯೆಯನ್ನು ನೀಡಿದ ನಂತರ ಆ ದತ್ತಾಂಶದ ಜೊತೆಗೆ ತಾತ್ಕಾಲಿಕ ನೋಂದಣಿ ಸಂಖ್ಯೆಯ ದತ್ತಾಂಶವನ್ನು Map ಮಾಡಿ API ಮೂಲಕ ಒದಗಿಸಲು ಈ ಮೂಲಕ ಕೋರಲಾಗಿದೆ.

ಇದರಿಂದಾಗಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯವು ನೀಡುವ Registraion Number ದೊರೆಯದೇ ಇದ್ದರೂ ಸಹ ರಾಜ್ಯ ವಿದ್ಯಾರ್ಥಿ ವೇತನದ ತಂತ್ರಾಂಶದಲ್ಲಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅನುಕೂಲವಾಗುತ್ತದೆ.

ಆದ್ದರಿಂದ, ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ತಾತ್ಕಾಲಿಕವಾಗಿ ನೋಂದಣಿ ಸಂಖ್ಯೆಯನ್ನು (Temporary Registration Number) ನೀಡುವ ಪ್ರಕ್ರಿಯೆಯನ್ನು ಎಲ್ಲಾ ವಿಶ್ವವಿದ್ಯಾಲಯಗಳು / ಇಲಾಖೆಗಳು ಒಂದು ವಾರದೊಳಗೆ ಪೂರೈಸಿ ಪ್ರಥಮ ವರ್ಷದ ವಿದ್ಯಾರ್ಥಿಗಳ ದತ್ತಾಂಶವನ್ನು ದಿನಾಂಕ:31-01-2021ರೊಳಗೆ UniData Server ಗೆ Push ಮಾಡಲು ಕೋರಲಾಗಿರುತ್ತದೆ.

ವಿವಿಧ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ, ಉಳಿದ ವರ್ಷಗಳ ವಿದ್ಯಾರ್ಥಿಗಳ ತಂತ್ರಾಂಶವನ್ನು UniData Server ಗೆ ಒಂದು ದಿನದೊಳಗೆ Push ಮಾಡುವ ಕಾರ್ಯವನ್ನು ಪೂರೈಸಿ ಅನುಪಾಲನಾ ವರದಿಯನ್ನು ಯೋಜನಾ ನಿರ್ದೇಶಕರು (ವಿದ್ಯಾರ್ಥಿ ವೇತನ), ಇ-ಆಡಳಿತ ಕೇಂದ್ರ, ಬಹುಮಹಡಿಗಳ ಕಟ್ಟಡ, ಬೆಂಗಳೂರು (pdsssp@karnataka.gov.in) ಇವರಿಗೆ ಕಳುಹಿಸಿಕೊಡಲು ತಮ್ಮನ್ನು ಕೋರಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಎಂ.ಬಿ.ವಿಜಯಕುಮಾರ್)
ಸರ್ಕಾರದ ಅಪರ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
ಇಲಾಖೆ (ಇ-ಆಡಳಿತ)

Received on 09/04/2021
WVP.

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
ಕನ್ನಡ ಕಾಯಕ ವರ್ಷ ೨೦೨೦-೨೧

ಸಂಖ್ಯೆ:ಡಿಸಿಇ:ಎಸ್.ಎಸ್.1:ಪಿ.ಪಿ.ಎಲ್/01/2020
ಎಸ್.ಇ.ಆರ್-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:07-04-2021

## ಸುತ್ತೋಲೆ

**ವಿಷಯ:** ಚುನಾವಣೆ ಕರ್ತವ್ಯ ನಿರ್ವಹಿಸಿರುವ/ನಿರ್ವಹಿಸಲಿರುವ ಅಧ್ಯಾಪಕರುಗಳಿಗೆ ನಿಯಮಾನುಸಾರ ಅನುಪಾತ ಗಳಿಕೆ ರಜೆ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ:** ವಿವಿಧ ಕಾಲೇಜುಗಳಿಂದ ಸ್ವೀಕೃತಗೊಂಡಿರುವ ಪ್ರಸ್ತಾವನೆಗಳು.

******

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ವಿವಿಧ ಸರ್ಕಾರಿ/ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಅಧ್ಯಾಪಕರುಗಳು ಗ್ರಾಮ ಪಂಚಾಯಿತಿ, ವಿಧಾನಸಭೆ, ವಿಧಾನ ಪರಿಷತ್ತು, ಲೋಕಸಭೆ ಮುಂತಾದ ಸಾರ್ವತ್ರಿಕ ಚುನಾವಣೆಗಳಲ್ಲಿ ಚುನಾವಣಾಧಿಕಾರಿ/ಉಪ ಚುನಾವಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಲು ಈ ಹಿಂದೆ ನಿರ್ದೇಶಿಸಲಾಗಿದೆ/ ನಿರ್ದೇಶಿಸಲಾಗುತ್ತಿದೆ. ಅಧ್ಯಾಪಕರುಗಳು Non-Vacation ವೃಂದದಲ್ಲಿ ಕರ್ತವ್ಯ ನಿರ್ವಹಿಸಿರುವುದರಿಂದ ಅವರುಗಳು ಆಯಾ ವಿಶ್ವವಿದ್ಯಾನಿಲಯಗಳ ವೇಳಾಪಟ್ಟಿಯನ್ವಯ ರಜೆ ಅವಧಿಯಲ್ಲಿ ಚುನಾವಣಾಧಿಕಾರಿ/ಉಪ ಚುನಾವಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ್ದಲ್ಲಿ, ಅವರುಗಳು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 113 (ಎ) ರನ್ವಯ ಅನುಪಾತ ಗಳಿಕೆ ರಜೆ ಮಂಜೂರು ಮಾಡುವಂತೆ ಪ್ರಾಂಶುಪಾಲರ ಮೂಲಕ ಮನವಿಗಳನ್ನು ಈ ಇಲಾಖೆಗೆ ಸಲ್ಲಿಸಲಾಗುತ್ತಿದೆ. ಆದರೆ ಚುನಾವಣಾಧಿಕಾರಿ/ಉಪ ಚುನಾವಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿರುವ ಬಗ್ಗೆ ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಚುನಾವಣಾಧಿಕಾರಿಯವರಿಂದ ಪಡೆದು ಒದಗಿಸಲಾಗುತ್ತಿದ್ದು, ಸದರಿ ಅವಧಿಯಲ್ಲಿ ವಿಶ್ವವಿದ್ಯಾನಿಲಯಗಳ ವೇಳಾಪಟ್ಟಿಯನ್ವಯ ರಜೆ ಅವಧಿಯಾಗಿದ್ದಲ್ಲಿ ಆ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿರುವುದಕ್ಕೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 113 (ಎ) ರನ್ವಯ ಅನುಪಾತ ಗಳಿಕೆ ರಜೆ ಮಂಜೂರು ಮಾಡುವಂತೆ ಚುನಾವಣಾಧಿಕಾರಿಯವರ ಕಛೇರಿಯಿಂದ ಯಾವುದೇ ಆದೇಶ/ಸುತ್ತೋಲೆಯನ್ನು ಪಡೆದು ಒದಗಿಸಿರುವುದಿಲ್ಲ. ಇದರಿಂದಾಗಿ ಸಕಾಲದಲ್ಲಿ ಮನವಿಗಳನ್ನು ಇತ್ಯರ್ಥಗೊಳಿಸಲು ಸಾಧ್ಯವಾಗುತ್ತಿಲ್ಲ.

ಆದ್ದರಿಂದ ಚುನಾವಣಾ ಕಾರ್ಯಗಳಲ್ಲಿ ಚುನಾವಣಾಧಿಕಾರಿ/ಸಹಾಯಕ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ/ನಿರ್ವಹಿಸಲಿರುವ ಅಧ್ಯಾಪಕರುಗಳು ಸಂಬಂಧಪಟ್ಟ ಚುನಾವಣಾಧಿಕಾರಿಯವರಿಂದ ಹಾಜರಾತಿ ಪ್ರಮಾಣ ಪತ್ರದೊಂದಿಗೆ ಅನುಪಾತ

ಗಳಿಕೆ ರಜೆ ಮಂಜೂರಾತಿಗೆ ಸಂಬಂಧಪಟ್ಟ ಆದೇಶ/ಸುತ್ತೋಲೆಯನ್ನು ಪಡೆದು ಆಯಾ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಒದಗಿಸಿದ್ದಲ್ಲಿ ಅಂತಹ ಅಧ್ಯಾಪಕರುಗಳ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ಆಯಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ಮಂಜೂರಾತಿ ಪಡೆಯಲು ಕ್ರಮವಹಿಸತಕ್ಕದೆಂದು ಈ ಮೂಲಕ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

**ಇವರಿಗೆ:**

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ.
2) ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಿಗೆ.

**ಪ್ರತಿಯನ್ನು:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಮೇಲ್ಕಂಡ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.
3) ಕಛೇರಿ ಪ್ರತಿ.